# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು

**ಸಿ.ಸಿ 1516-2018** **ಸಿ. ಡಬ್ಲುಃ 13**

**ಪಿ. ಡಬ್ಲುಃ 05**

| | |
|---|---|
| ಸಾಕ್ಷಿದಾರರ ಹೆಸರು | ಹರೀಶ |
| ತಂದೆ/ಗಂಡನ ಹೆಸರು | ಮುದ್ದೇಗೌಡ |
| ವಯಸ್ಸು | 35 ವರ್ಷ |
| ಕೆಲಸ | ವ್ಯವಸಾಯ |
| ವಾಸ | ಸಣ್ಣೇಗೌಡನ ಹುಂಡಿ, ಚಾಮರಾಜನಗರ ತಾ . |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 12-06-2024** |

## ಮುಖ್ಯ ವಿಚಾರಣೆಃ ಶ್ರೀ. ಎಪಿಪಿ ವಕೀಲರಿಂದಃ

ಚಾಸಾ-1 ಮತ್ತು 12 ನನಗೆ ಗೊತ್ತಿಲ್ಲ. ಆರೋಪಿ ನನಗೆ ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ಸ್ಥಳ ಮಹಜರ್ ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ-2 ಕ್ಕೆ ನಾನು ಸುಮಾರು 6 ವರ್ಷಗಳ ಹಿಂದೆ ಪೊಲೀಸರ ಕೋರಿಕೆ ಠಾಣೆಯಲ್ಲಿ ಮೇರೆಗೆ ಸಹಿ ಮಾಡಿರುತ್ತೇನೆ. ನಿಪಿ-2 ಕ್ಕೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಘಟನಾ ಸ್ಥಳವನ್ನು ಯಾರು ತೋರಿಸಿದರು ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಈ ಪ್ರಕರಣದ ವಿದ್ಯಮಾನ ಗೊತ್ತಿಲ್ಲ.

(ಸಸಅ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು)

**ಪಾಟೀ ಸವಾಲುಃ ಶ್ರೀ. ಎಪಿಪಿ ಯವರಿಂದ**

ದಿಃ18-05-2018 ರಂದು ಪೊಲೀಸರು ನನ್ನನ್ನು ಮತ್ತು ಚಾಸಾ-12 ರವರನ್ನು ಬರಮಾಡಿಕೊಂಡು ಕೇಸಿನ ವಿದ್ಯಮಾನ ತಿಳಿಸಿ ಪಂಚರಾಗುವಂತೆ ಕೋರಿಕೊಂಡು ಎಂದರೆ ಸರಿಯಲ್ಲ . ಅದಕ್ಕೆ ನಾವು ಒಪ್ಪಿದ ಮೇರೆಗೆ ಚಾಸಾ-1 ರವರು ಕೃತ್ಯ ಸ್ಥಳವನ್ನು ತೋರಿದ ಮೇರೆಗೆ ಸಂಜೆ 5.00 ರಿಂದ 5.45 ವರೆಗೆ ನಿಪಿ-2 ರಂತೆ ಮಹಜರ್ ಕ್ರಮ ಜರುಗಿಸಿ ಅಪಘಾತಕ್ಕೀಡಾದ ವಾಹನ ಕೆಎ-09-ಸಿ-7656 ಟಾಟಾ ಏಸ್ ಗೂಡ್ಸ್ ವಾಹನವನ್ನು ಮುಂದಿನ ಕ್ರಮಕ್ಕಾಗಿ ಅಮಾನತ್ತು ಪಡಿಸಿಕೊಂಡು ಮಹಜರ್ ಅನ್ನು ಓದಿ ಹೇಳಿ ನನ್ನ ಮತ್ತು ಚಾಸಾ-12 ರವರ ಸಹಿ ಪಡೆದುಕೊಂಡರು ಎಂದರೆ ಸರಿಯಲ್ಲ. ನಿಪಿ-2 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**